ಕರ್ನಾಟಕ ಸರ್ಕಾರ

*ಸಂಖ್ಯೆ:* ಪಪೂಶಿ/ಸಿಬ್ಬಂದಿ-1 ಎ(4)/ ದೂರು 81/2014-15

ನಿರ್ದೇಶಕರ ಕಚೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
ಮಲ್ಲೇಶ್ವರಂ 18ನೇ ಅಡ್ಡರಸ್ತೆ,
ಬೆಂಗಳೂರು-12,
ದಿನಾಂಕ:11-02-2015.

## ಜ್ಞಾಪನ

ವಿಷಯ: ಬೆಳಗಾವಿ ಜಿಲ್ಲಾ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಪ್ರಭಾರ ವ್ಯವಸ್ಥೆ ಮಾಡುವ ಬಗ್ಗೆ.

ಉಲ್ಲೇಖ: ಪೊಲೀಸ್ ಇನ್ಸ್‌ಪೆಕ್ಟರ್, ಕರ್ನಾಟಕ ಲೋಕಾಯುಕ್ತ, ಬೆಳಗಾವಿ ಇವರ ಫ್ಯಾಕ್ಸ್ ಸಂದೇಶ ದಿನಾಂಕ: 11.02.2015.

****

ಪೊಲೀಸ್ ಇನ್ಸ್‌ಪೆಕ್ಟರ್, ಕರ್ನಾಟಕ ಲೋಕಾಯುಕ್ತ, ಬೆಳಗಾವಿ ಇವರು ಪ್ರಕರಣ ಸಂಖ್ಯೆ 02/20015 ರಲ್ಲಿ ಶ್ರೀ ಚಂದ್ರಶೇಖರ ರಾಮಪ್ಪಾ ತೊರವಿ, ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಳಗಾವಿ ಇವರನ್ನು ದಿನಾಂಕ:10.02.2015 ರಂದು ದಸ್ತಗಿರಿ ಮಾಡಿದ್ದು ಸದರಿಯವರು ನ್ಯಾಯಾಂಗ ಬಂಧನದಲ್ಲಿರುವುದಾಗಿ ಉಲ್ಲೇಖಿತ ಪತ್ರದಲ್ಲಿ ವರದಿ ಮಾಡಿರುತ್ತಾರೆ. ಆದುದರಿಂದ, ಶ್ರೀ ಜಿ. ಎ ತಿಗಡಿ, ಪ್ರಾಂಶುಪಾಲರು, ಸರ್ಕಾರಿ ಪದವಿ ಪೂರ್ವ ಕಾಲೇಜು, ನಾಗನೂರು, ಬೈಲಹೊಂಗಲ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರನ್ನು ಆಡಳಿತದ ಹಿತದೃಷ್ಟಿಯಿಂದ ಹಾಗೂ ಪರೀಕ್ಷಾ ಕಾರ್ಯವು ಸುಗಮವಾಗಿ ನಡೆಸುವ ದೃಷ್ಟಿಯಿಂದ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಕರ್ನಾಟಕ ನಾಗರೀಕ ಸೇವಾ ನಿಯಮ 68 ರ ಪ್ರಕಾರ ಬೆಳಗಾವಿ ಜಿಲ್ಲಾ ಉಪನಿರ್ದೇಶಕರ ಹುದ್ದೆಯ ಹೆಚ್ಚುವರಿ ಪ್ರಭಾರದಲ್ಲಿರಿಸಿ ಆದೇಶಿಸಿದೆ.

Kodkole

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಗೆ,

ಶ್ರೀ ಜಿ. ಎ ತಿಗಡಿ, ಪ್ರಾಂಶುಪಾಲರು, ಸರ್ಕಾರಿ ಪದವಿ ಪೂರ್ವ ಕಾಲೇಜು, ನಾಗನೂರು, ಬೈಲಹೊಂಗಲ ತಾಲ್ಲೂಕು, ಬೆಳಗಾವಿ ಜಿಲ್ಲೆ.

<u>ಪ್ರತಿಯನ್ನು:</u>

1. ಜಿಲ್ಲಾಧಿಕಾರಿಗಳು, ಜಿಲ್ಲಾಧಿಕಾರಿಗಳ ಕಚೇರಿ, ಬೆಳಗಾವಿ ಜಿಲ್ಲೆ, ಬೆಳಗಾವಿ ರವರಿಗೆ ಮಾಹಿತಿಗಾಗಿ.
2. ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಳಗಾವಿ ಜಿಲ್ಲೆ, ಬೆಳಗಾವಿ.
3. ನಿರ್ದೇಶಕರ ಆಪ್ತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು.
4. ಕಚೇರಿ ಪ್ರತಿ.